# ಕನ್ನಡ ಪೋಸ್ಟ್

KANNADA POST | ಇದು ಸುದ್ದಿ ವಿಳಾಸ | ಕನ್ನಡ ದಿನಪತ್ರಿಕೆ

ಸಂಪಾದಕ : ಮಂಜು ಬನವಾಸೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 148 | Pages. 2 | Date: 17-05-2026, SUNDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 148 – ಪುಟಗಳು : 2 | 17-05-2026 | ಭಾನುವಾರ | Ph: 8762954248 | ದರ : ₹1


# ಬಡವರ ಕೆಲಸ ಮಾಡಲು ನಿರ್ಲಕ್ಷ್ಯ ಬೇಡ

## ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ | ಪ್ರಗತಿ ಪರಿಶೀಲನಾ ಸಭೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜನಸ್ಪಂದನಾ ಕಾರ್ಯಕ್ರಮವನ್ನೇ ಕಾಯದೇ ಬಡವರ ಕೆಲಸವನ್ನು ಜವಾಬ್ದಾರಿಯುತವಾಗಿ ಮಾಡುವ ಮೂಲಕ ಸವಲತ್ತುಗಳನ್ನು ದೊರಕಿಸಿಕೊಡಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಸೂಚಿಸಿದರು.

ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿ ಶನಿವಾರ ಜಿಲ್ಲೆಯ ವಿವಿಧ ವಿಧಾನಸಭಾ ಕ್ಷೇತ್ರದಲ್ಲಿ ನಡೆದ ಜನಸ್ಪಂದನ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ ಸ್ವೀಕೃತವಾಗಿರುವ ಅರ್ಜಿಗಳನ್ನು ವಿಲೇವಾರಿ ಮಾಡಿರುವ ಬಗ್ಗೆ ಅಧಿಕಾರಿಗಳೊಂದಿಗೆ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿ, ಜನಸ್ಪಂದನ ಸಭೆಗಳಲ್ಲಿ ಸ್ವೀಕರಿಸಿದ 4538 ಅರ್ಜಿಗಳಲ್ಲಿ 4444 ಅರ್ಜಿ ವಿಲೇವಾರಿಯಾಗಿದ್ದರೂ ಕೆಲವು ಅರ್ಜಿ ಸಮರ್ಪಕವಾಗಿಲ್ಲ ಎಂದರು.

94 ಸಿ ಮತ್ತು 94 ಸಿ.ಸಿ.ಗೆ ಸಂಬಂಧಿಸಿದ ಅರ್ಜಿಗಳ ವಿಲೇವಾರಿಗೆ ಆದ್ಯತೆ ಮೇಲೆ ಜಂಟಿ ಸರ್ವೆ ಮಾಡಿ ಜನರಿಗೆ ಹಕ್ಕುಪತ್ರ ನೀಡಲು ಕ್ರಮ ಕೈಗೊಳ್ಳಬೇಕು. ಜನಸ್ಪಂದನ ಕಾರ್ಯಕ್ರಮ ನಡೆಸುವುದರಿಂದ ಸಮಸ್ಯೆಗಳನ್ನು ಅರ್ಥಮಾಡಿಕೊಳ್ಳಲು ಸಹಕಾರಿ ಆಗಿದೆ. ಆರ್.ಆರ್.ಟಿ. ಪ್ರಕರಣಗಳು ಸ್ವೀಕಾರ ಆಗುತ್ತಿರುವ ಅರ್ಜಿಗಳನ್ನು ನೋಡಿದರೆ ಇನ್ನೂ ಸಮಸ್ಯೆಗಳು ಬಗೆಹರಿಯದೆ ಇದರ ಆಳ ಅಗಲ ಎಷ್ಟಿದೆ ಎಂದು ತಿಳಿಯಬೇಕಿದೆ ಎಂದು ತಿಳಿಸಿದರು.




ಜನ ಸ್ಪಂದನ ಕಾರ್ಯಕ್ರಮಕ್ಕೆ ಪದೆ ಪದೇ ಒಂದೇ ವಿಷಯಕ್ಕೆ ಸಂಬಂಧಿಸಿದ ಅರ್ಜಿಗಳು ಬರುತ್ತಿವೆ. ನೀವು ಸಮಸ್ಯೆಯನ್ನು ಅರ್ಥ ಮಾಡಿಕೊಂಡು ಪರಿಹಾರಕ್ಕೆ ಕ್ರಮ ಕೈಗೊಳ್ಳಬೇಕು. ಕಾಟಾಚಾರಕ್ಕೆ ವಿಲೇ ಮಾಡಬಾರದು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ನಕಾಶೆಯಲ್ಲಿ ರಸ್ತೆ ಇರುವ ಜಮೀನಿಗೆ ಬಿತ್ತನೆ ಬೀಜ, ರಸಗೊಬ್ಬರ ತೆಗೆದುಕೊಂಡು ಹೋಗಲು ಹಾಗೂ ಬೆಳೆ ಕಟಾವು ಮಾಡಿ ತೆಗೆದುಕೊಂಡು ಹೋಗಲು ಅವಕಾಶ ಕಲ್ಪಿಸಲು ತಹಸೀಲ್ದಾರ್ ಅವರಿಗೆ ಅಧಿಕಾರ ಇದೆ ಎಂದು ತಿಳಿಸಿದರು.

ಆರ್.ಆರ್.ಟಿ.ಸಂಬಂದಿಸಿದ ಅರ್ಜಿಗಳನ್ನು ಜನರೇ ನೇರವಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶವಿದೆ. ಈ ನಿಟ್ಟಿನಲ್ಲಿ ಜನರಿಗೆ ಅರಿವು ಮೂಡಿಸಬೇಕು. ಸಾರ್ವಜನಿಕರ ಕೆಲಸ ತಂತಾನೇ ಆಗಬೇಕು. ಅವರು ಕಚೇರಿಗೆ ಅಲೆಯುವಂತಾಗಬಾರದು. ಈ ನಿಟ್ಟಿನಲ್ಲಿ ಅಧಿಕಾರಿಗಳು ಅರ್ಥೈಸಿಕೊಂಡು ಜವಾಬ್ದಾರಿಯಿಂದ ನಿಮ್ಮ ಹಂತದಲ್ಲಿಯೇ ಪರಿಹಾರ ಮಾಡಬೇಕು ಎಂದು ಹೇಳಿದರು.

ಬಿತ್ತನೆಗೆ ಗುಣಮಟ್ಟದ ಮೆಕ್ಕೆ ಜೋಳ, ಆಲೂಗಡ್ಡೆ ಮತ್ತು ಅಗತ್ಯ ಔಷಧಿಗಳನ್ನು ಕೃಷಿಕರಿ ಗೆ ನಿಗಧಿತ ಸಮಯದಲ್ಲಿ ಕಲ್ಪಿಸಲು ಕ್ರಮಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ರೋಗ ಬರದಂತೆ ತಡೆಗಟ್ಟಲು ಮುನ್ನೆಚ್ಚರಿಕೆ ವಹಿಸಿ ನಿರಂತರವಾಗಿ ಮಾನಿಟರಿಂಗ್ ಮಾಡಲು ನಿರ್ದೇಶನ ನೀಡಿದರು. ಹಾಸನ- ಪಿರಿಯಾಪಟ್ಟಣ ರಸ್ತೆ 10 ರಿಂದ 15 ಕಡೆ ಎರಡು ಕಿಲೋ ಮೀಟರ್ ಅಂತರದಲ್ಲಿ ಕಿತ್ತು ಹೋಗಿದೆ. ಗುಣಮಟ್ಟ ಸರಿಯಾಗಿದ್ದರೆ ಕಿತ್ತು ಹೋಗಲು ಹೇಗೆ ಸಾಧ್ಯ. ಉಳಿದಿರುವ ರಸ್ತೆ ಕಾಮಗಾರಿಯ ಗುಣಮಟ್ಟ ಸರಿಯಾಗಿದೆ ಎಂದು ಪಾಸ್ ಆಗಿರುವುದು ಹೇಗೆ ಸಾಧ್ಯ ಎಂದು ಕೆ.ಆರ್.ಡಿ.ಸಿ.ಎಲ್. ಅಧಿಕಾರಿಯನ್ನು, ಕಿತ್ತುಕೊಂಡು ಹೋಗುತ್ತಿದ್ದರು ಸಹ ಕೆಲಸ ಮುಂದುವರೆಯುತ್ತಿದೆ ನಿಮ್ಮ ಜವಾಬ್ದಾರಿ ಏನು ಎಂದು ಪ್ರಶ್ನಿಸಿದರು.

> “ ದರಖಾಸ್ತು ಪೋಡಿಗೆ ಗರಿಷ್ಟ 5 ದಾಖಲೆಗಳು ಇರಬೇಕು. ಜಿಲ್ಲೆಯ 24 ಪ್ರಕರಣಗಳಲ್ಲಿ ಅಳತೆ ಕಾರ್ಯವಾಗಿದೆ. 30 ಸಾವಿರ ಪ್ರಕರಣಗಳು ಪ್ರಕ್ರಿಯೆಯಲ್ಲಿವೆ. ಅದರಲ್ಲಿ ಮಿಸ್ಸಿಂಗ್ ಪ್ರಕರಣಗಳು ಹೆಚ್ಚು ಇದ್ದು, ಅಂತಹ ಪ್ರಕರಣಗಳನ್ನು ಮಿಸ್ಸಿಂಗ್ ಕಮಿಟಿಯಲ್ಲಿ ಇಟ್ಟು ದುರಸ್ತಿ ಮಾಡಲು ಅಗತ್ಯ ಕ್ರಮ ಕೈಗೊಳ್ಳಬೇಕು.
>
> – ಕೃಷ್ಣಬೈರೇಗೌಡ, ಜಿಲ್ಲಾ ಉಸ್ತುವಾರಿ ಸಚಿವ

ಜಿಲ್ಲೆಯಲ್ಲಿ ಈಗಾಗಲೇ ಒಪ್ಪಿಗೆ ನೀಡಿರುವ ಕೆಪಿಎಸ್ ಶಾಲೆಗಳನ್ನು ತೆರೆಯಲು ಸ್ಥಳೀಯ ಶಾಸಕರುಗಳೊಂದಿಗೆ ಚರ್ಚಿಸಿ ಅಗತ್ಯ ಕ್ರಮವಹಿಸಿ, ಗ್ರಾಮಗಳಿಂದ ಮಕ್ಕಳನ್ನು ಕೆಪಿಎಸ್ ಶಾಲೆಗೆ ಕರೆತರಲು ಸ್ಥಳೀಯವಾಗಿ ಲಭ್ಯವಿರುವ ವಾಹನಗಳನ್ನು ಬಳಸಿಕೊಂಡು ಸಾರಿಗೆ ವ್ಯವಸ್ಥೆಗೆ ಕ್ರಮವಹಿಸಲು ಸೂಚಿಸಿದರು.

ಸಂಸದ ಶ್ರೇಯಸ್ ಪಟೇಲ್, ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭನ್ವಿತಾ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶುಭಂ ಶುಕ್ಲಾ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸೌರಬ್ ಕುಮಾರ್ ಉಪಸ್ಥಿತರಿದ್ದರು.

## ಬೇಲೂರು ಪುರಸಭೆ ಅಧ್ಯಕ್ಷರಿಗೆ ಜಯ ಕರ್ನಾಟಕ ಸಂಘಟನೆ ಅಭಿನಂದನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಪುರಸಭೆ ಅಧ್ಯಕ್ಷರಾಗಿ ನೂತನವಾಗಿ ಆಯ್ಕೆಯಾದ ಅಕ್ರಂ ಷರೀಫ್ ಅವರನ್ನು ಜಯ ಕರ್ನಾಟಕ ಸಂಘಟನೆ ಪದಾಧಿಕಾರಿಗಳು ಶನಿವಾರ ಪುರಸಭೆ ಕಚೇರಿಯಲ್ಲಿ ಅಭಿನಂದಿಸಿ ಪಟ್ಟಣದ ಸಮಗ್ರ ಅಭಿವೃದ್ಧಿ ಹಾಗೂ ಮುಖ್ಯರಸ್ತೆ ವಿಸ್ತರಣೆಗೆ ಮುಂದಾಗುವಂತೆ ಮನವಿ ಮಾಡಿದರು.

ಜಯ ಕರ್ನಾಟಕ ಸಂಘಟನೆ ತಾಲೂಕು ಅಧ್ಯಕ್ಷ ಎಸ್.ಎಂ.ರಾಜು ಮಾತನಾಡಿ, ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಅಕ್ರಂ ಷರೀಫ್ ಅವರು ತಮ್ಮ ಅವಧಿಯಲ್ಲಿ ಉತ್ತಮ ಕೆಲಸಗಳನ್ನು ಮಾಡಲಿ ಮತ್ತು ಬೇಲೂರು ಪಟ್ಟಣಕ್ಕೆ ಪ್ರವೇಶಿಸುವುದಕ್ಕೆ ಒಂದೇ ಮುಖ್ಯರಸ್ತೆ ಇರುವುದು. ಅದು ಕಿರಿದಾಗಿದ್ದು ಪ್ರತಿನಿತ್ಯ ವಾಹನಗಳ ದಟ್ಟಣೆ ಪ್ರವಾಸಿಗರು ಮತ್ತು ಸ್ಥಳೀಯರನ್ನು ಕಾಡುತ್ತಿದೆ. ಈ ಬಗ್ಗೆ ಅಧ್ಯಕ್ಷರು ಗಮನ ಹರಿಸಬೇಕು. ಜತೆಗೆ ಐಡಿಎಸ್‌ಎಂಟಿ ವಾಣಿಜ್ಯ ಮಳಿಗೆಗಳ ಹೊಯ್ಸಳ ಮಾರುಕಟ್ಟೆ ಆವರಣದಲ್ಲಿ ಕಟ್ಟಡ ಸೋರುತ್ತಿದೆ. ಅದಕ್ಕೆ ನೀರು ಸೋರದಂತೆ ಚುರುಕಿ ಹಾಕಿಸಿ ಕೊಡಬೇಕು. ಹೈಮಾಸ್ ಲೈಟ್ ಪದೇ ಪದೇ ಕೆಡುತಿದ್ದು ದುರಸ್ತಿಗೆ ಮುಂದಾಗಬೇಕು. ಮತ್ತು ಪಟ್ಟಣದ ಜನತೆಗೆ ಮೂಲ ಸೌಲಭ್ಯ ಕಲ್ಪಿಸಬೇಕು. ಪಟ್ಟಣದ ಸಮಗ್ರ ಅಭಿವೃದ್ಧಿಯ ವಿಷಯವಾಗಿ ನಮ್ಮ ಸಂಘಟನೆ ಸದಾ ನಿಮ್ಮೊಂದಿಗಿರುತ್ತದೆ ಎಂದರು.

# ಚ.ರಾ.ಪಟ್ಟಣದಲ್ಲಿ ಕಾಂಗ್ರೆಸ್ ಭವನಕ್ಕೆ ಶಂಕುಸ್ಥಾಪನೆ

## 1 ಕೋಟಿ ರೂ. ವೆಚ್ಚದಲ್ಲಿ ಕಟ್ಟಡ | ಕಾಂಗ್ರೆಸ್ ಮುಖಂಡರ ಒಗ್ಗಟ್ಟಿನ ಫಲ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಪಟ್ಟಣದ ಗದ್ದೆರಾಮೇಶ್ವರ ಬಡಾವಣೆಯಲ್ಲಿ ಸುಮಾರು 1 ಕೋಟಿ ರೂ. ವೆಚ್ಚದಲ್ಲಿ ನೂತನ ತಾಲ್ಲೂಕು ಕಾಂಗ್ರೆಸ್ ಭವನ ಕಾಮಗಾರಿ ಕೈಗೊಳ್ಳಲಾಗಿದ್ದು ಶನಿವಾರ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಭೂಮಿಪೂಜೆ ನೆರವೇರಿಸಿದರು.

ಈ ವೇಳೆ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳ ಮೂಲಕ ಎರಡೂವರೆ ವರ್ಷದಲ್ಲಿ 1,20,000 ಕೋಟಿ ರೂ.ಗಳನ್ನು ಜನರಿಗೆ ತಲುಪಿಸಿರುವುದು ಕರ್ನಾಟಕ ಕಾಂಗ್ರೆಸ್. ವಿಶ್ವದ ಯಾವ ರಾಷ್ಟ್ರಗಳು ಈ ಸಾಧನೆ ಮಾಡಿಲ್ಲ ಎಂದರು.

ನಮ್ಮ ಸರ್ಕಾರ ಬಡವರು, ರೈತರ ಪರವಾಗಿ ಕೆಲಸ ಮಾಡುತ್ತಿದೆ. ಒಂದು ಲಕ್ಷದ ಇಪ್ಪತ್ತು ಸಾವಿರ ಕೋಟಿ ರೂ. ಹಣ ಜನರ ಕೈಗೆ ನೇರವಾಗಿ ಕೊಟ್ಟಿದ್ದೇವೆ.

ಇದನ್ನು ಯಾವ ಸರ್ಕಾರವೂ ಪ್ರಪಂಚದಲ್ಲಿ ಮಾಡಿಲ್ಲ. ಕರ್ನಾಟಕದಲ್ಲಿ ಮಾತ್ರ ಸಾಧ್ಯವಾಗಿದೆ. ಕೆಲವರು ಘೋಷಣೆ ಮಾಡಿದ್ದಾರೆ ಆದರೆ ಸಾಧನೆ ಸಾಧ್ಯವಾಗಿಲ್ಲ. ಮಧ್ಯವರ್ತಿಗಳ ಹಾವಳಿ ಇಲ್ಲದೆ, ಕಚೇರಿಗಳಿಗೆ ಫಲಾನುಭವಿಗಳು ಅಲೆದಾಡದೆ ಜನರು ಕುಳಿತಲ್ಲಿಗೆ ಯೋಜನೆಗಳು ತಲುಪುತ್ತಿವೆ. ಕಾಂಗ್ರೆಸ್ ಕೊಟ್ಟ ಮಾತಿನಂತೆ ನಡೆದುಕೊಳ್ಳುತ್ತಿದೆ ಎಂದರು.



ಐದು ಗ್ಯಾರಂಟಿ ಯೋಜನೆಗಳು ನಾಲ್ಕೂವರೆ ಕೋಟಿ ಕನ್ನಡಿಗರಿಗೆ ಪ್ರತಿದಿನ, ಪ್ರತಿ ತಿಂಗಳು ಸಹಾಯವಾಗುತ್ತಿದೆ. ಒಂದು ಕುಟುಂಬಕ್ಕೆ ತಿಂಗಳಿಗೆ ಐದು, ಆರು, ಏಳು ಸಾವಿರ ರೂ. ಸಿಗುತ್ತಿದೆ. ಇಂತಹ ಯೋಜನೆ ಯಾರು ಮಾಡಿಲ್ಲ, ಯಾವ ಜಾತಿ, ಪಕ್ಷ ನೋಡದೆ ಎಲ್ಲರಿಗೂ ಸಮಾನವಾಗಿ ಮಾಡಿಕೊಟ್ಟಿದ್ದೇವೆ. ಎಲ್ಲರೂ ನಮ್ಮವರೇ, ಎಲ್ಲಾ ಒಂದೇ ಕುಟುಂಬಕ್ಕೆ ಸೇರಿದವರು. ಜಾತಿ, ಧರ್ಮ ನೋಡಿ ಗ್ಯಾರಂಟಿ ಕೊಡುತ್ತಿಲ್ಲ. ಎಲ್ಲರನ್ನೂ ಸಮಾನವಾಗಿ ತೆಗೆದುಕೊಂಡು ಹೋಗುತ್ತಿದ್ದೇವೆಂದರು. ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಮುಖಂಡರು ಪಕ್ಷ ಸಂಘಟನೆಗೆ ಶ್ರಮಿಸುತ್ತಿದ್ದಾರೆ. ಮುಂಬರುವ ಗ್ರಾಮ, ತಾಲ್ಲೂಕು, ಜಿಲ್ಲಾ ಪಂಚಾಯಿತಿ, ಪುರಸಭೆ ಹಾಗು ಮಹಾನಗರ ಪಾಲಿಕೆ ಚುನಾವಣೆಯಲ್ಲಿ ಕಾರ್ಯಕರ್ತರು, ಮುಖಂಡರು, ರಾಜ್ಯ ಕಾಂಗ್ರೆಸ್ ಸರ್ಕಾರದ 5 ಗ್ಯಾರಂಟಿ ಯೋಜನೆಗಳಿಂದ ಪ್ರತಿ ಕುಟುಂಬಕ್ಕೂ ಸಿಗುತ್ತಿರುವ ಸೌಲಭ್ಯಗಳ ಕುರಿತು ಮತದಾರರಿಗೆ ಮನವರಿಕೆ ಮಾಡಿಕೊಡುವ ಮೂಲಕ ಪಕ್ಷ ಸಂಘಟನೆಗೆ ಮುಂದಾಗುವಂತೆ ಸಲಹೆ ನೀಡಿದರು.

ವಿಧಾನ ಪರಿಷತ್ ಮಾಜಿ ಸದಸ್ಯ ಎಂ.ಎ.ಗೋಪಾಲಸ್ವಾಮಿ ಮಾತನಾಡಿ, ತಾಲ್ಲೂಕಿನಲ್ಲಿ ಕಾಂಗ್ರೆಸ್ ಭವನ ನಿರ್ಮಾಣ ಮಾಡುವುದು ಕಾರ್ಯಕರ್ತರು ಹಾಗು ಮುಖಂಡರ ದಶಕಗಳ ಕನಸಾಗಿತ್ತು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಾರ್ಗದರ್ಶನ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನಾಯಕತ್ವ ಹಾಗು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ನಾಯಕತ್ವದಲ್ಲಿ ಭವನದ ಕನಸು ನನಸಾಗುತ್ತಿದೆ. 60★40 ನಿವೇಶನದಲ್ಲಿ ಸುಮಾರು 1 ಕೋಟಿ ರೂ. ವೆಚ್ಚದಲ್ಲಿ ಸುಸಜ್ಜಿತವಾಗಿ ಕಾಂಗ್ರೆಸ್ ಭವನ ನಿರ್ಮಾಣಕ್ಕೆ ರೂಪುರೇಷೆ ಸಿದ್ಧಪಡಿಸಲಾಗಿದೆ. ನೂತನ ಭವನದ ಎರಡನೇ ಮಹಡಿಯಲ್ಲಿ ವಿದ್ಯಾರ್ಥಿಗಳಿಗೆ ಕಲಿಕೆಗೆ ಅನುಕೂಲವಾಗಲೆಂದು ಕೋಚಿಂಗ್ ತರಗತಿ, ಮಹಿಳೆಯರಿಗೆ ಹೆಚ್ಚಿನ ನೆರವು ಕಲ್ಪಿಸುವ ನಿಟ್ಟಿನಲ್ಲಿ ಸ್ತ್ರೀಶಕ್ತಿ ಹಾಗು ಸ್ವ ಸಹಾಯ ಸಂಘಗಳ ಸದಸ್ಯರಿಗೆ ತರಬೇತಿ ಸೇರಿ ಮಹಿಳಾ ಸಬಲೀಕರಣಕ್ಕೆ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಕಾಂಗ್ರೆಸ್ ಭವನ ಕೇವಲ ರಾಜಕೀಯ ಚಟುವಟಿಕೆಗಳಿಗೆ ಸೀಮಿತ ಆಗಬಾರದೆಂಬ ದೃಷ್ಟಿಯಿಂದ ಯೋಜನೆ ಹಾಕಿಕೊಳ್ಳಲಾಗಿದೆ ಎಂದು ತಿಳಿಸಿದರು.

ಸಂಸದ ಶ್ರೇಯಸ್ ಪಟೇಲ್ ಮಾತನಾಡಿದರು. ಕರ್ನಾಟಕ ವಿದ್ಯುತ್ ಮಂಡಳಿ ಅಧ್ಯಕ್ಷ ಲಲಿತ್ ರಾಘವ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜೆ.ಎಂ. ರಾಮಚಂದ್ರ, ಎಂ.ಕೆ. ಮಂಜೇಗೌಡ, ಕೆಎಸ್‌ಐಸಿ ನಿಗಮದ ಮಾಜಿ ಅಧ್ಯಕ್ಷ ಸಿ.ವಿ.ರಾಜಪ್ಪ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಮಂಜುನಾಥ್, ಕಾಂಗ್ರೆಸ್ ಮುಖಂಡ ಎಂ.ಶಂಕರ್ ಹಾಗೂ ಇತರರಿದ್ದರು.

# ಅಕ್ರಮ ಮದ್ಯ ಮಾರಾಟಕ್ಕೆ ಬ್ರೇಕ್ ಹಾಕಿ: ಗ್ರಾಮಸ್ಥರ ಒತ್ತಾಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ತಾಲ್ಲೂಕಿನ ಹೆಬ್ಬಸಾಲೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬಸವನಗುಡಿ, ಅಜ್ಜಿಗುಡ್ಡೆ ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಕಡಿವಾಣ ಹಾಕಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಗ್ರಾಮದ ಕೆಲ ಅಂಗಡಿಗಳಲ್ಲಿ ಪರವಾನಗಿ ಇಲ್ಲದೇ ಅಕ್ರಮವಾಗಿ ಮದ್ಯ ಮಾರಾಟ ಮಾಡಲಾಗುತ್ತಿದ್ದು, ಸಾರ್ವಜನಿಕರ ವಿರೋಧದ ನಡುವೆಯೂ ಈ ಚಟುವಟಿಕೆ ನಿರಂತರವಾಗಿ ನಡೆಯುತ್ತಿದೆ.



ಗ್ರಾಮದ ಮುಖ್ಯ ರಸ್ತೆ ಹಾಗು ವಸತಿ ಪ್ರದೇಶಗಳ ಸಮೀಪದಲ್ಲಿಯೇ ಮದ್ಯ ಮಾರಾಟ ನಡೆಯುತ್ತಿರುವುದರಿಂದ ಮಹಿಳೆಯರು ಹಾಗೂ ನಾಗರಿಕರು ಓಡಾಡದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಮಹಿಳೆಯರು ಆತಂಕ ವ್ಯಕ್ತಪಡಿಸಿದರು.

ಅಕ್ರಮ ಮದ್ಯ ಮಾರಾಟದಿಂದ ಗ್ರಾಮದಲ್ಲಿ ಯುವಕರು ಮದ್ಯಪಾನಕ್ಕೆ ದಾಸರಾಗುತ್ತಿದ್ದು, ಕೆಲ ಕುಟುಂಬಗಳಲ್ಲಿ ಜಗಳ ಹಾಗು ಆರ್ಥಿಕ ಸಮಸ್ಯೆಗಳು ಹೆಚ್ಚಾಗಿವೆ. ದಿನಸಿ ಅಂಗಡಿ ಹೆಸರಿನಲ್ಲಿ ಮದ್ಯ ಮಾರಾಟ ಮಾಡಲಾಗುತ್ತಿದೆ. ಸಂಜೆ ವೇಳೆ ಮದ್ಯಪಾನ ಮಾಡಿದವರು ಸಾರ್ವಜನಿಕ ಸ್ಥಳಗಳಲ್ಲಿ ಅಸಭ್ಯವಾಗಿ ವರ್ತಿಸುತ್ತಿದ್ದು, ಮಹಿಳೆಯರು ಮತ್ತು ವಿದ್ಯಾರ್ಥಿಗಳು ಓಡಾಡಲು ಭಯಪಡುವಂತಾಗಿದೆ ಎಂದು ಆರೋಪಿಸಿದರು.

ಕೆಲ ಅಂಗಡಿಗಳು ಅನಧಿಕೃತವಾಗಿ ನಿರ್ಮಾಣಗೊಂಡಿದ್ದು, ಯಾವುದೇ ನಿಯಮ ಪಾಲನೆ ಇಲ್ಲದೇ ವ್ಯಾಪಾರ ನಡೆಸುತ್ತಿರುವುದರಿಂದ ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಕೂಡಲೇ ಪರಿಶೀಲನೆ ನಡೆಸಬೇಕು. ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕದಿದ್ದರೆ ಮುಂದಿನ ದಿನಗಳಲ್ಲಿ ಗ್ರಾಮಸ್ಥರೇ ಪ್ರತಿಭಟನೆ ನಡೆಸಬೇಕಾದ ಪರಿಸ್ಥಿತಿ ಎದುರಾಗಲಿದೆ ಎಂದು ಎಚ್ಚರಿಕೆ ನೀಡಿದರು.






# ಮದ್ಯವರ್ಜನ ಶಿಬಿರಗಳಿಂದ 1.36 ಲಕ್ಷ ಮಂದಿಗೆ ಹೊಸ ಬದುಕು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ ರಾಜ್ಯಾದ್ಯಂತ ಹಮ್ಮಿಕೊಳ್ಳಲಾಗುತ್ತಿರುವ ಮದ್ಯವರ್ಜನ ಶಿಬಿರಗಳ ಪರಿಣಾಮವಾಗಿ ಇದುವರೆಗೆ ಸುಮಾರು 1 ಲಕ್ಷ 36 ಸಾವಿರಕ್ಕೂ ಹೆಚ್ಚು ಮಂದಿ ಮದ್ಯಪಾನ ತ್ಯಜಿಸಿ ಹೊಸ ಬದುಕಿನತ್ತ ಹೆಜ್ಜೆ ಇಟ್ಟಿದ್ದಾರೆ



ಎಂದು ಯೋಜನೆಯ ಶಿಬಿರಾಧಿಕಾರಿ ನಂದಕುಮಾರ್ ಹೇಳಿದರು.

ಪಟ್ಟಣದ ತೇರಪಂಥ್ ಭವನದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್, ಅಖಿಲ ಕರ್ನಾಟಕ ಜಿಲ್ಲಾ ಜನಜಾಗೃತಿ ವೇದಿಕೆ, ರಾಜ್ಯ ಮದ್ಯಪಾನ ಸಂಯಮ ಮಂಡಳಿ ಬೆಂಗಳೂರು, ಕ್ರಾಫರ್ಡ್ ಆಸ್ಪತ್ರೆ ಸಕಲೇಶಪುರ, ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘ, ಪೊಲೀಸ್ ಇಲಾಖೆ, ಲಯನ್ಸ್ ಸಂಸ್ಥೆ, ರೋಟರಿ ಸಂಸ್ಥೆ, ಶೌರ್ಯ ವಿಪತ್ತು ನಿರ್ವಹಣಾ ಘಟಕ ಹಾಗೂ ತಾಲೂಕು ಮದ್ಯವರ್ಜನ ಶಿಬಿರ ವ್ಯವಸ್ಥಾಪನಾ ಸಮಿತಿಯ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ 2054ನೇ ಮದ್ಯವರ್ಜನ ಶಿಬಿರ ಉದ್ಘಾಟಿಸಿ ಮಾತನಾಡಿದರು.

→ 2

# ಋಷಿಶ್ರೀ ವಿದ್ಯಾನಿಕೇತನ ಸಂಸ್ಥೆಗೆ ನೋಟಿಸ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹೊಳೆನರಸೀಪುರ ತಾಲ್ಲೂಕಿನ ಐಚನಹಳ್ಳಿಯ ಋಷಿಶ್ರೀ ವಿದ್ಯಾನಿಕೇತನ ಸಿಬಿಎಸ್‌ಇ ವಿದ್ಯಾಸಂಸ್ಥೆ ಆಡಳಿತ ಮಂಡಳಿ ವಿರುದ್ಧ ಕಾನೂನು ಉಲ್ಲಂಘನೆಯ ಗಂಭೀರ ಆರೋಪ ಕೇಳಿಬಂದಿದ್ದು ಮಾನ್ಯತೆ ರದ್ದಾಗುವ ಸಾಧ್ಯತೆ ಹೆಚ್ಚಿದೆ.

2017–18ನೇ ಸಾಲಿನಿಂದ ಪ್ರಾರಂಭವಾದ ಶಾಲೆಯಲ್ಲಿ ಪ್ರಸ್ತುತ 700 ಮಕ್ಕಳು ವ್ಯಾಸಂಗ ಮಾಡುತ್ತಿದ್ದಾರೆ. ಆಡಳಿತ ಮಂಡಳಿ ವೈಮನಸ್ಸಿನಿಂದ ಶಾಲೆಯ ಮಾನ್ಯತೆ ರದ್ದಾಗುವ ಭೀತಿ ಕಾಡುತ್ತಿದ್ದು ಮಕ್ಕಳನ್ನು ಬೇರೆ ಶಿಕ್ಷಣ ಸಂಸ್ಥೆಗೆ ದಾಖಲಿಸುವ ಕುರಿತು ಶಿಕ್ಷಣ ಇಲಾಖೆ ಚಿಂತನೆ ನಡೆಸುತ್ತಿದೆ ಎಂದು ತಿಳಿದುಬಂದಿದೆ.

**ಡಿಡಿಪಿಐ ನೋಟಿಸ್**

ನಿಯಮ ಉಲ್ಲಂಘನೆ ಸಂಬಂಧ ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ಎನ್.ಬಲರಾಮ್ ಅವರು ಈಗಾಗಲೇ ಋಷಿಶ್ರೀ ಶಾಲೆಯ ಕಾರ್ಯದರ್ಶಿಗೆ ನೋಟಿಸ್ ಜಾರಿ ಮಾಡಿದ್ದಾರೆ. ವಿದ್ಯಾಸಂಸ್ಥೆ ಸಂಸ್ಥಾಪಕರಲ್ಲಿ ಒಬ್ಬರಾದ ಸುರೇಶ್ ಅವರು ಮಾಡಿಕೊಟ್ಟಿರುವ 30 ವರ್ಷಗಳ ಲೀಸ್/ಭೋಗ್ಯದ ಕರಾರು ಕಾರಣಾಂತರಗಳಿಂದ 2025ರ ಫೆ. 19 ರಂದು ರದ್ದಾಗಿದೆ. ಈಗ ಶಾಲೆ ನಡೆಯುತ್ತಿರುವ ಸ್ಥಳಕ್ಕೆ ಯಾವುದೇ ಕರಾರು ಪತ್ರ ಇಲ್ಲ. ಹೀಗಾಗಿ ಶಾಲೆ ಅನಧಿಕೃತ ಎಂದು ಪರಿಗಣಿಸಬೇಕಾಗುತ್ತದೆ. ಶಾಲಾ ಆಡಳಿತ ಮಂಡಳಿಯು ಸಾರ್ವಜನಿಕ ಶಿಕ್ಷಣ ಇಲಾಖೆ ಹಾಗು ಗ್ರಾಮ ಪಂಚಾಯಿತಿಯಿಂದ ಅನುಮತಿ ಪಡೆಯದೆ ಎರಡು ಅಂತಸ್ತಿನ ಕಟ್ಟಡ ನಿರ್ಮಾಣಕ್ಕೆ ಮುಂದಾಗಿದೆ. ಅದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುವ ಸಾಧ್ಯತೆಯಿದೆ. ಈ ಎಲ್ಲಾ ಗಂಭೀರ ಆರೋಪಗಳ ಬಗ್ಗೆ ಸೂಕ್ತ ಕಾರಣ ನೀಡಬೇಕೆಂದು ಮಾ. 26ರಂದು ಶಿಕ್ಷಣ ಇಲಾಖೆ ಉಪನಿರ್ದೇಶಕರು ನೋಟಿಸ್ ಜಾರಿ ಮಾಡಿದ್ದಾರೆ.




15 ದಿನಗಳ ಒಳಗೆ ಪ್ರತಿಕ್ರಿಯೆ ನೀಡದಿದ್ದರೆ ಶಿಕ್ಷಣ ಕಾಯ್ದೆ 1983 ಮತ್ತು ಆರ್‌ಟಿಇ ಕಾಯ್ದೆ 2009ರಂತೆ ಶಾಲೆ ವಿರುದ್ಧ ಕ್ರಮ ಜರುಗಿಸಲಾಗುವುದೆಂದು ಎಚ್ಚರಿಕೆ ನೀಡಲಾಗಿತ್ತು. ನೋಟೀಸ್‌ಗೆ ಆಡಳಿತ ಮಂಡಳಿ ಯಾವುದೇ ಪ್ರತಿಕ್ರಿಯೆ ನೀಡಿಲ್ಲವೆಂಬ ಮಾಹಿತಿ ಲಭ್ಯವಾಗಿದ್ದು ಸೋಮವಾರ ಅಂತಿಮ ಕ್ರಮದ ಆದೇಶ ಪ್ರಕಟವಾಗುವ ಸಾಧ್ಯತೆಯಿದೆ.

**ಆತಂಕದಲ್ಲಿ ವಿದ್ಯಾರ್ಥಿಗಳು**

ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ಪ್ರಾರಂಭವಾದ ಋಷಿಶ್ರೀ ವಿದ್ಯಾನಿಕೇತನ ಶಾಲೆಯು ಉತ್ತಮ ಫಲಿತಾಂಶದ ಮೂಲಕ ಒಳ್ಳೆಯ ಹೆಸರು ಪಡೆದಿದೆ. ಆದರೆ ಶಾಲೆಗೆ ಜಾಗ ನೀಡಿದ ಸುರೇಶ್ ಹಾಗೂ ಆಡಳಿತ ಮಂಡಳಿ ನಡುವೆ ಹಣಕಾಸಿನ ವಿಚಾರಕ್ಕೆ ವೈಮನಸ್ಸು ಉಂಟಾಗಿ ಅವರು 2024ರಲ್ಲಿ ಸಂಸ್ಥೆಯಿಂದ ಹೊರ ಬಂದಿದ್ದಾರೆ ಎನ್ನಲಾಗಿದೆ.

ಮೈಸೂರು ಮೂಲದ ಉದ್ಯಮಿಯೊಬ್ಬರು ಈಗ ಆಡಳಿತ ವಹಿಸಿಕೊಂಡಿದ್ದು ಕಾನೂನು ಗಾಳಿಗೆ ತೂರಿ ವರ್ತಿಸುತ್ತಿದ್ದಾರೆ. ಅದರಿಂದ ಮಕ್ಕಳ ಭವಿಷ್ಯವನ್ನು ಸಂಕಷ್ಟಕ್ಕೆ ಸಿಲುಕಿಸಿದ್ದಾರೆ. ಪ್ರತಿವರ್ಷ ಜಾಗದ ಪರವಾನಗಿ ನವೀಕರಣ, ಹೆಚ್ಚುವರಿ ಕಟ್ಟಡಕ್ಕೆ ಅನುಮತಿ ಪಡೆಯಬೇಕೆಂಬ ನಿಯಮ ಕಡ್ಡಾಯವಾಗಿದ್ದರೂ ಪಾಲಿಸದೆ ಇರುವುದು ಸಾಕಷ್ಟು ಪ್ರಶ್ನೆಗಳನ್ನು ಹುಟ್ಟು ಹಾಕಿದೆ.

**ಸುರೇಶ್ ಮಾಲೀಕತ್ವದಲ್ಲಿ ಜಾಗ**

ಋಷಿಶ್ರೀ ವಿದ್ಯಾ ನಿಕೇತನ ಶಾಲೆಯು 2 ಎಕರೆ ವಿಸ್ತಾರ ಹೊಂದಿದ್ದು ಸುರೇಶ್ ಅವರೇ ಮಾಲಿಕತ್ವ ಹೊಂದಿದ್ದಾರೆ. ನಗರ ಯೋಜನಾ ಪ್ರಾಧಿಕಾರದಿಂದ ಅನುಮತಿ ಪಡೆದು ಭೂಮಿ ಪರಿವರ್ತನೆ ಮಾಡಿಕೊಳ್ಳಲಾಗಿದೆ. ಶಿಕ್ಷಣ ಸಂಸ್ಥೆಗಾಗಿ ಮಾರ್ಪಾಡಾಗಿರುವ ಜಾಗ ಇದಾಗಿದ್ದು ಪ್ರತಿವರ್ಷ ನವೀಕರಣ ಆಗದಿರುವುದೇ ಸದ್ಯದ ಸಮಸ್ಯೆಗೆ ಕಾರಣವಾಗಿದೆ. ಜೂನ್ 1 ರಿಂದ ತರಗತಿಗಳು ಪ್ರಾರಂಭವಾಗುತ್ತಿದ್ದು, ಮಕ್ಕಳನ್ನು ಶಾಲೆಗೆ ಕಳುಹಿಸುವುದೋ ಅಥವಾ ಬೇರೆ ಶಾಲೆಗಳಿಗೆ ದಾಖಲಿಸುವುದೇ ಎಂಬ ಗೊಂದಲದಲ್ಲಿ ಪೋಷಕರಿದ್ದಾರೆ.

# ಬ್ರಿಲಿಯಂಟ್ ಕಾಲೇಜಿನಲ್ಲಿ ಅಭಿ ವಿನ್ಯಾಸ ಕಾರ್ಯಕ್ರಮ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಬ್ರಿಲಿಯಂಟ್ ಪದವಿ ಪೂರ್ವ ಕಾಲೇಜಿನ ಪ್ರಥಮ ಪಿಯುಸಿ ವಿದ್ಯಾರ್ಥಿಗಳಿಗೆ ಶುಕ್ರವಾರ ಅಭಿ ವಿನ್ಯಾಸ ಕಾರ್ಯಕ್ರಮ ನೆರವೇರಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಹಾಗೂ ಆಡಳಿತಾಧಿಕಾರಿ ಪ್ರೊ. ಜವರಾಜೇಗೌಡ ಅವರು ಮಾತನಾಡಿ, ವಿದ್ಯಾರ್ಥಿಗಳಿಗೆ ಮುಂದಿನ ಎರಡು ವರ್ಷದ ಪಿಯುಸಿ ಅಧ್ಯಯನ ಹಾಗು ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿ ಕುರಿತು ಮಾಹಿತಿ ನೀಡಿದರು.

ಸಂಪನ್ಮೂಲ ವ್ಯಕ್ತಿ ಥಾಮಸ್ ಜಾನ್ ರೋಸ್ ಮಾತನಾಡಿ, ವಿದ್ಯಾರ್ಥಿ ಜೀವನದಲ್ಲಿ ವಿನಯವಂತಿಕೆ, ಪೋಷಕರ ಮೇಲಿನ ಪ್ರೀತಿ, ಗುರುಗಳಿಗೆ ತೋರಬೇಕಾದ ಗೌರವ, ಮುಂದಿನ ವಿದ್ಯಾಭ್ಯಾಸದ ಅವಧಿಯಲ್ಲಿ ತಾವು ಅಧ್ಯಯನ ಮಾಡುವ ವಿಧಾನಗಳ ಕುರಿತು ಸ್ಪೂರ್ತಿದಾಯಕ ಮಾತುಗಳನ್ನಾಡಿದರು.

ಸಂಸ್ಥೆಯ ಕಾರ್ಯದರ್ಶಿ ಡಾ.ಹೆಚ್.ಎಸ್.ಅನಿಲ್ ಕುಮಾರ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಉಪ ಪ್ರಾಂಶುಪಾಲೆ ಪುಷ್ಪ ಅವರು ಉಪನ್ಯಾಸ ನೀಡಿದರು.

ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ರಾಜ್ಯಕ್ಕೆ 7ನೇ ಸ್ಥಾನ ಹಾಗು ಕಾಲೇಜಿಗೆ ಪ್ರಥಮ ಸ್ಥಾನ ಪಡೆದ ಟಿ.ಆರ್.ಹೇಮಲತಾ ಮತ್ತು ಪ್ರಥಮ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ 600ಕ್ಕೆ 599 ಅಂಕ ಪಡೆದು ಕಾಲೇಜಿಗೆ ಪ್ರಥಮ ಸ್ಥಾನ ಪಡೆದ ಭುವನ್ ಅವರನ್ನು ಸನ್ಮಾನಿಸಲಾಯಿತು.

ಸಂಸ್ಥೆಯ ವ್ಯವಸ್ಥಾಪಕ ಕೆ.ವಿ.ರಘುಕುಮಾರ್, ಉಪನ್ಯಾಸಕರು, ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು ಹಾಗೂ ಪೋಷಕರು ಹಾಜರಿದ್ದರು.

# ಕನ್ನಡ ಪದ ಬಳಕೆಯಲ್ಲಿ ಲೋಪಗಳಾಗಬಾರದು




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಕನ್ನಡ ಭಾಷೆಯನ್ನು ಬಳಸುವ ಬಹುತೇಕ ಜನರಲ್ಲಿ ಪದಗಳ ಉಚ್ಚಾರಣೆ ಹಾಗೂ ಪದಬಳಕೆಯಲ್ಲಿ ಲೋಪಗಳು ಕಾಣಿಸುತ್ತಿವೆ. ವಿದ್ಯಾರ್ಥಿಗಳು ಕನ್ನಡ ಭಾಷೆಯನ್ನು ಸರಿಯಾದ ರೀತಿಯಲ್ಲಿ ಬಳಸಿ ಭಾಷೆಯ ಗೌರವ ಹೆಚ್ಚಿಸುವ ಕಾರ್ಯ ಮಾಡಬೇಕು ಎಂದು ಪ್ರಾಧ್ಯಾಪಕಿ ಡಾ.ಕೆ.ಜಿ.ಕವಿತಾ ಹೇಳಿದರು.

ಪಟ್ಟಣದ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ಆಯೋಜಿಸಿದ್ದ 2025–26ನೇ ಸಾಲಿನ ಸಾಂಸ್ಕೃತಿಕ, ಕ್ರೀಡೆ, ಎನ್‌ಎಸ್‌ಎಸ್, ರೇಂಜರ್ಸ್ ಹಾಗೂ ಯುವ ರೆಡ್ ಕ್ರಾಸ್ ಘಟಕಗಳ ಸಮಾರೋಪ ಸಮಾರಂಭ ಉದ್ಘಾಟಿಸಿ ಮಾತನಾಡಿ, ಹಿಂದಿನ ಮೂವತ್ತು ವರ್ಷಗಳ ಶಿಕ್ಷಣ ವ್ಯವಸ್ಥೆ ಹಾಗೂ ಇಂದಿನ ಶಿಕ್ಷಣ ವ್ಯವಸ್ಥೆಯನ್ನು ಹೋಲಿಸಿದಾಗ ಬಹಳಷ್ಟು ವ್ಯತ್ಯಾಸ ಕಾಣಿಸುತ್ತಿದೆ ಎಂದರು.

ಇಂದಿನ ಸ್ಪರ್ಧಾತ್ಮಕ ಯುಗಕ್ಕೆ ತಕ್ಕಂತೆ ವಿದ್ಯಾರ್ಥಿಗಳು ಜ್ಞಾನಾರ್ಜನೆ ಮಾಡುವ ಜೊತೆಗೆ ಪ್ರಗತಿಯತ್ತ ಸಾಗಬೇಕು. ನಾವು ವ್ಯಾಸಂಗ ಮಾಡುತ್ತಿದ್ದ ಸಂದರ್ಭದಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಮೂಲಭೂತ ಸೌಲಭ್ಯಗಳೇ ಕಡಿಮೆಯಾಗಿದ್ದವು. ಶಿಕ್ಷಣ ಪಡೆಯುವುದೇ ದೊಡ್ಡ ಸಾಧನೆಯಾಗಿತ್ತು. ಇಂದಿನಂತೆ ಸಮವಸ್ತ್ರ, ಬೂಟು, ಲೇಖನ ಸಾಮಗ್ರಿಗಳು ಅಥವಾ ವಿವಿಧ ಸೌಲಭ್ಯಗಳು ಲಭ್ಯವಿರಲಿಲ್ಲ. ಪೋಷಕರು ನೀಡುತ್ತಿದ್ದ ರಾಗಿ ರೊಟ್ಟಿಯನ್ನೇ ಬೆಳಿಗ್ಗೆ ಹಾಗೂ ಮಧ್ಯಾಹ್ನ ಸೇವಿಸುತ್ತಿದ್ದೆವು ಎಂದು ಸ್ಮರಿಸಿದರು.

ಸಮಾರೋಪ ಸಮಾರಂಭದ ಅಂಗವಾಗಿ ಆಯೋಜಿಸಿದ್ದ ಕ್ರೀಡಾಕೂಟದ ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಡಾ.ಗುರುರಾಜ್, ಸಂಚಾಲಕ ತಿಪ್ಪೇಸ್ವಾಮಿ, ಸಹಾಯಕ ಪ್ರಾಧ್ಯಾಪಕರಾದ ಡಿ.ಪಿ. ಶಂಕರ್, ರವಿಕುಮಾರ್, ಉಪನ್ಯಾಸಕಿ ವೀಣಾ, ಉಪನ್ಯಾಸಕರಾದ ಡಾ. ಮಂಜುರಾಜ್, ಡಾ. ಕುಸುಮ, ಖಲೀದ್ ಅಹ್ಮದ್, ಕೆ.ಎಸ್. ಚಂದ್ರಕಲಾ, ವಿದ್ಯಾ, ನಾಗೇಶ್ ನಾಯಕ್ ಉಪಸ್ಥಿತರಿದ್ದರು.

# ಎಂಸಿಇ ಪ್ರಾಂಶುಪಾಲರಾಗಿ ಪ್ರದೀಪ್ ಅಧಿಕಾರ ಸ್ವೀಕಾರ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಮಲೆನಾಡು ಎಂಜಿನಿಯರಿಂಗ್ ಕಾಲೇಜಿನ ನೂತನ ಪ್ರಾಂಶುಪಾಲರಾಗಿ ಡಾ. ಎಸ್. ಪ್ರದೀಪ್ ಅಧಿಕಾರ ವಹಿಸಿಕೊಂಡರು.

ಮಲೆನಾಡು ತಾಂತ್ರಿಕ ಶಿಕ್ಷಣ ಸಮಿತಿ ಅಧ್ಯಕ್ಷ ಬಿ.ಆರ್. ಗುರುದೇವ್ ಹಾಗೂ ಆಡಳಿತ ಮಂಡಳಿ ಪದಾಧಿಕಾರಿಗಳ ಸಮ್ಮುಖದಲ್ಲಿ ಡಾ.ಹೆಚ್.ಜೆ.ಅಮರೇಂದ್ರ ಅವರು ಜವಾಬ್ದಾರಿ ಹಸ್ತಾಂತರಿಸಿದರು. ಡಾ. ಎಸ್.ಪ್ರದೀಪ್ ಎಂಸಿಇ ಕಾಲೇಜಿನಲ್ಲಿ ಮೆಕ್ಯಾನಿಕಲ್ ಇಂಜಿನಿಯರಿಂಗ್ ವ್ಯಾಸಂಗ ಮಾಡಿ ಅದೇ ಕಾಲೇಜಿನಲ್ಲಿ ಉಪಾನ್ಯಾಸಕರಾಗಿ ಮೆಕ್ಯಾನಿಕಲ್ ವಿಭಾಗದ ಮುಖ್ಯಸ್ಥರಾಗಿ ಹಾಗು ಈ ಹಿಂದೆ ಮಲೆನಾಡು ಇಂಜಿನಿಯರಿಂಗ್ ಕಾಲೇಜು ಪ್ರಾಂಶುಪಾಲರಾಗಿ ಸೇವೆ ಸಲ್ಲಿಸಿದ್ದಾರೆ.

ಸಮಿತಿ ಪ್ರಧಾನ ಕಾರ್ಯದರ್ಶಿ ಜಿ.ಟಿ.ಕುಮಾರ್, ಖಜಾಂಚಿ ಎಸ್. ಶ್ರೀಧರ್, ನಿರ್ದೇಶಕರಾದ ಕೆ.ಎಂ.ಶಿವಣ್ಣ, ಕೆ.ಪ್ರಭಾಕರ್, ಕೆ.ಎನ್.ಗುರಪ್ಪ, ಬೂವನಹಳ್ಳಿ ಶ್ರೀನಿವಾಸ್, ಎಸ್. ಸುರೇಶ್ ಮತ್ತಿತರರಿದ್ದರು.

# ಅರಸೀಕೆರೆ ಶನೈಶ್ವರ ದೇಗುಲದಲ್ಲಿ ವಿಶೇಷ ಪೂಜೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಶನೈಶ್ವರ ಸ್ವಾಮಿಯ ಜಯಂತೋತ್ಸವ ಅಂಗವಾಗಿ ಶನೈಶ್ವರ ದೇವಾಲಯದಲ್ಲಿ ಮೂರು ದಿನಗಳಿಂದ ಹೋಮ ಹವನ ಸೇರಿದಂತೆ ವಿಶೇಷ ಪೂಜೆಗಳು ನೆರವೇರಿದವು.

ಪ್ರತಿದಿನ ಶನೈಶ್ವರ ಸ್ವಾಮಿಯ ಮೂಲ ವಿಗ್ರಹಕ್ಕೆ ತೈಲಾಭಿಷೇಕ ರುದ್ರಾಭಿಷೇಕ ಸೇರಿದಂತೆ ನಾನಾ ಅಭಿಷೇಕಗಳು ವಿವಿಧ ಅರ್ಚನೆಗಳು ನಡೆದರೆ ಮತ್ತೊಂದೆಡೆ ದೇವಾಲಯದ ಆವರಣದಲ್ಲಿ ಗಣಪತಿ ಹೋಮ, ನವಗ್ರಹ ಹೋಮ, ಸುದರ್ಶನ ಚಂಡಿಕಾ ಹೋಮ ಹೀಗೆ ನಿರಂತರವಾಗಿ ಹೋಮ ಹವನ ಜಪತಪಗಳು ಭಕ್ತರ ಶ್ರದ್ಧಾ ಭಕ್ತಿಯೊಂದಿಗೆ ನಡೆದವು.

ಅಮಾವಾಸ್ಯೆ ಹಾಗೂ ಶನಿವಾರ ಶನೈಶ್ವರ ಸ್ವಾಮಿಯ ವರದಂತಿಯಾಗಿದ್ದರಿಂದ ಸಹಜವಾಗಿಯೇ ಮುಂಜಾನೆಯಿಂದಲೇ ಭಕ್ತರು ದೇವಾಲಯಕ್ಕೆ ಆಗಮಿಸಿ ದೇವಾಲಯದಲ್ಲಿ ನಡೆಯುತ್ತಿದ್ದ ಧಾರ್ಮಿಕ ಕಾರ್ಯಕ್ರಮದಲ್ಲಿ ಪಾಲ್ಗೊಂಡರಲ್ಲದೆ ಶ್ರದ್ಧಾ ಭಕ್ತಿಯೊಂದಿಗೆ ಶನೈಶ್ವರ ಸ್ವಾಮಿಗೆ ಪೂಜೆ ಸಲ್ಲಿಸಿ ದರ್ಶನ ಮಾಡುವ ಮೂಲಕ ಪುನೀತರಾದರು.

ದೇವಾಲಯದ ಪ್ರಧಾನ ಅರ್ಚಕ ಮುರುಳಿ ಮಂದಾರ್ತಿ ಮಾತನಾಡಿ, ಮನುಷ್ಯನ ಪಾಪ ಪುಣ್ಯಗಳನ್ನ



ತೂಗಿ ಫಲಗಳನ್ನು ಪ್ರಸಾದಿಸುವ ಶನೈಶ್ಚರ ಸ್ವಾಮಿಯು ಪಲಾಪೇಕ್ಷೆ ಇಲ್ಲದೆ ನಿಸ್ವಾರ್ಥತೆಯಿಂದ ಮಾಡುವ ಭಕ್ತಿ ಸಮರ್ಪಣೆಗೆ ಸುಲಭವಾಗಿ ಒಲಿಯುವ ಶನೈಶ್ವರನು ಕಲಿಯುಗದಲ್ಲಿ ಭಕ್ತರ ಪಾಲಿನ ಕಲ್ಪತರು ಆಗಿದ್ದು ಸ್ವಾಮಿಯ ವರದಂತಿ ಮಹೋತ್ಸ ವದಲ್ಲಿ ಪಾಲ್ಗೊಂಡ ಭಕ್ತರ ಮನದ ಇಷ್ಟಾರ್ಥಗಳನ್ನು ಈಡೇರಿಸಲಿ ಎಂದು ತಾವು ಸಹ ಪ್ರಾರ್ಥಿಸಿರುವುದಾಗಿ ಹೇಳಿದರು.

ಪೂರ್ಣಾವತಿ ಸಂದರ್ಭದಲ್ಲಿ ನಾನಾ ರಾಜಕೀಯ ಪಕ್ಷಗಳ ಮುಖಂಡರು ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ದೇವಾಲಯದ ಅಭಿವೃದ್ಧಿ ಸಮಿತಿ ಮುಖಂಡರು ಉಪಸ್ಥಿತರಿದ್ದರು.

ವರ್ಧಂತಿ ಮಹೋತ್ಸವದಲ್ಲಿ ಪಾಲ್ಗೊಂಡ ಭಕ್ತಾದಿಗಳಿಗೆ ನಿರಂತರವಾಗಿ ದಾಸೋಹ ವ್ಯವಸ್ಥೆ ಹಾಗೂ ತೀರ್ಥ ಪ್ರಸಾದ ವಿನಿಯೋಗವನ್ನು ದೇವಾಲಯದ ಅಭಿವೃದ್ಧಿ ಸಮಿತಿ ಮತ್ತು ಭಕ್ತ ವೃಂದ ಹಮ್ಮಿಕೊಂಡಿತ್ತು.

# ಮದ್ಯವರ್ಜನ ಶಿಬಿರಗಳಿಂದ 1.36 ಲಕ್ಷ ಮಂದಿಗೆ ಹೊಸ ಬದುಕು

1ನೇ ಉಟದಿಂದ ....

ಡಾ. ಡಿ. ವೀರೇಂದ್ರ ಹೆಗ್ಗಡೆ ಅವರ ಪ್ರೇರಣೆಯಿಂದ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ರಾಜ್ಯದ ವಿವಿಧ ಭಾಗಗಳಲ್ಲಿ ನಿರಂತರವಾಗಿ ಮದ್ಯವರ್ಜನ ಶಿಬಿರಗಳನ್ನು ಆಯೋಜಿಸಲಾಗುತ್ತಿದೆ. ಮದ್ಯದ ದುಷ್ಚಟದಿಂದ ಅನೇಕ ಕುಟುಂಬಗಳು ಆರ್ಥಿಕ ಹಾಗೂ ಮಾನಸಿಕ ಸಂಕಷ್ಟಕ್ಕೆ ಸಿಲುಕುತ್ತಿದ್ದು, ಕುಟುಂಬದ ಮುಖ್ಯಸ್ಥರ ಅತಿಯಾದ ಮದ್ಯಪಾನದಿಂದ ಹಲವಾರು ಮನೆಗಳು ಬೀದಿಗೆ ಬೀಳುವ ಸ್ಥಿತಿ ನಿರ್ಮಾಣವಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಮದ್ಯಪಾನವು ಕೇವಲ ವ್ಯಕ್ತಿಯ ಆರೋಗ್ಯವನ್ನಷ್ಟೇ ಹಾಳು ಮಾಡುವುದಿಲ್ಲ. ಕುಟುಂಬದ ಶಾಂತಿ, ಮಕ್ಕಳ ಭವಿಷ್ಯ ಹಾಗೂ ಸಮಾಜದ ನೆಮ್ಮದಿಯ ಮೇಲೂ ದುಷ್ಪರಿಣಾಮ ಬೀರುತ್ತದೆ. ಆದ್ದರಿಂದ ಸಮಾಜದಲ್ಲಿ ಜಾಗೃತಿ ಮೂಡಿಸಿ ಮದ್ಯವರ್ಜನೆಗೆ ಉತ್ತೇಜನ ನೀಡುವುದು ಅತ್ಯಂತ ಅಗತ್ಯವಾಗಿದೆ ಎಂದು ಹೇಳಿದರು.

ಶಿಬಿರಗಳಲ್ಲಿ ಭಾಗವಹಿಸುವವರಿಗೆ ವೈದ್ಯಕೀಯ ಸಲಹೆ, ಸಮಾಲೋಚನೆ, ಮನೋಬಲ ವೃದ್ಧಿ ಕಾರ್ಯಕ್ರಮಗಳು ಹಾಗೂ ಪುನರ್ವಸತಿ ಕುರಿತ ಮಾರ್ಗದರ್ಶನ ನೀಡಲಾಗುತ್ತಿದೆ. ಇದರ ಪರಿಣಾಮವಾಗಿ ಅನೇಕರು ಮದ್ಯದ ದಾಸ್ಯದಿಂದ ಹೊರಬಂದು ಸಾಮಾನ್ಯ ಜೀವನಕ್ಕೆ ಮರಳುತ್ತಿರುವುದು ಸಂತಸದ ಸಂಗತಿಯಾಗಿದೆ ಎಂದರು.

ನಗರ ಠಾಣೆಯ ಆರಕ್ಷಕ ನಿರೀಕ್ಷಕ ವನರಾಜ್ ಮಾತನಾಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಸಮಾಜಮುಖಿ ಹಾಗೂ ಜನಜಾಗೃತಿ ಕಾರ್ಯಕ್ರಮಗಳು ನಿರಂತರವಾಗಿ ನಡೆಯುತ್ತಿವೆ. ವಿಶೇಷವಾಗಿ ಮದ್ಯವರ್ಜನ ಶಿಬಿರಗಳು ಮದ್ಯಪಾನದ ಚಟದಿಂದ ಬಳಲುತ್ತಿರುವವರ ಬದುಕಿನಲ್ಲಿ ಹೊಸ ಬೆಳಕು ಮೂಡಿಸುತ್ತಿವೆ ಎಂದು ಹೇಳಿದರು.

# ಇತಿಹಾಸದಲ್ಲಿ ಈ ದಿನ

## ಮೇ-17

1792: ಅಮೆರಿಕದ ನ್ಯೂಯಾರ್ಕ್ ನಗರದಲ್ಲಿ ಷೇರು ವ್ಯಾಪಾರ ಆರಂಭಗೊಂಡು ನಂತರದ ದಿನಗಳಲ್ಲಿ ನ್ಯೂಯಾರ್ಕ್ ಸ್ಟಾಕ್ ಎಕ್ಸ್‌ಚೇಂಜ್ ರೂಪುಗೊಂಡಿತು.

1865: ವಿಶ್ವ ದೂರಸಂಪರ್ಕ ಸಹಕಾರಕ್ಕಾಗಿ ಅಂತರರಾಷ್ಟ್ರೀಯ ದೂರಸಂಪರ್ಕ ಒಕ್ಕೂಟ ಸ್ಥಾಪಿಸಲಾಯಿತು.

1913: ಭಾರತದ ಖ್ಯಾತ ಚಿತ್ರರಂಗ ಪಿತಾಮಹ ದಾದಾಸಾಹೇಬ್ ಫಾಲ್ಕೆ ಅವರ ಮೊದಲ ಭಾರತೀಯ ಚಲನಚಿತ್ರ, ರಾಜಾ ಹರಿಶ್ಚಂದ್ರ ಬಿಡುಗಡೆಯಾಯಿತು.

1940: ದ್ವಿತೀಯ ಮಹಾಯುದ್ಧದ ವೇಳೆ ಜರ್ಮನಿ ಬೆಲ್ಜಿಯಂ ರಾಜಧಾನಿ ಬ್ರಸ್ಸೆಲ್ಸ್ ನಗರವನ್ನು ವಶಪಡಿಸಿಕೊಂಡಿತು.

1974: ಭಾರತದ ಮೊದಲ ಅಣುಶಕ್ತಿ ಪರೀಕ್ಷೆ ಸ್ಮೈಲಿಂಗ್ ಬುದ್ಧ (ಪೋಖ್ರಣ್) ನಲ್ಲಿ ಯಶಸ್ವಿಯಾಗಿ ನಡೆಯಿತು.

# ಇಂದು ಹಾಸನದಲ್ಲಿ ಗುರು ಸಿದ್ದರಾಮೋತ್ಸವ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಅರಸೀಕೆರೆ ತಾಲ್ಲೂಕು ದೊಡ್ಡೇನಹಳ್ಳಿಯಲ್ಲಿ ಶ್ರೀ ಗುರು ಸಿದ್ದರಾಮೇಶ್ವರ ಸ್ವಾಮಿಯ ಪ್ರಥಮ ವರ್ಷದ ಸಿದ್ದರಾಮೋತ್ಸವ ಮೇ.17 ರಂದು ನಗರದಲ್ಲಿ ನಡೆಯಲಿದೆ ಎಂದು ಅಖಿಲ ಭಾರತ ಲಿಂಗಾಯತ-ವೀರಶೈವ ಮಹಾಸಭಾದ ತಾಲ್ಲೂಕು ಅಧ್ಯಕ್ಷ ಕಟ್ಟಾಯ ಶಿವಕುಮಾರ್ ತಿಳಿಸಿದರು.

ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮೇಶ್ವರ ಸ್ವಾಮಿ ಉತ್ಸವ ಇದೇ ಮೊದಲ ಬಾರಿಗೆ ನಗರದಲ್ಲಿ ನಡೆಯುತ್ತಿದೆ. ಭಾನುವಾರ ಬೆಳಿಗ್ಗೆ 11 ಗಂಟೆಗೆ ನಗರಕ್ಕೆ ಸ್ವಾಮಿಯ ಆಗಮನವಾಗಲಿದ್ದು, ನಗರದ ಅಧಿದೇವತೆ ಹಾಸನಾಂಬ ದೇವಾಲಯ ಆವರಣಕ್ಕೆ ಬರಲಿದೆ ಎಂದು ಹೇಳಿದರು.

ಮಧ್ಯಾಹ್ನ 1 ಗಂಟೆಗೆ ಸಿದ್ದೇಶ್ವರಸ್ವಾಮಿ ಸನ್ನಿಧಿಯಲ್ಲಿ ಸ್ವಾಮಿಗೆ ಮಹಾ ರುದ್ರಾಭಿಷೇಕ, ಶಿವಾಷ್ಟೋತ್ತರ, ಬಿಲ್ವಾರ್ಚನೆ, ಮಹಾ ಮಂಗಳಾರತಿ ನಡೆಯಲಿದೆ. ಮಧ್ಯಾಹ್ನ 1 ಗಂಟೆಗೆ ಅನ್ನ ಸಂತರ್ಪಣೆ ನಡೆಯಲಿದೆ. ಸಂಜೆ 4.30 ರಿಂದ ದೊಡ್ಡೇನಹಳ್ಳಿ ವೀರಭದ್ರೇಶ್ವರ ಸ್ವಾಮಿಯ ಪೂಜಾ ಕುಣಿತ, ವೀರಗಾಸೆ, ನಂದಿಧ್ವಜ, ಮದ್ದು ಗುಂಡಿನ ಪ್ರದರ್ಶನದೊಂದಿಗೆ ಸ್ವಾಮಿಯವರ




ಅದ್ದೂರಿ ಅಡ್ಡಪಲ್ಲಕ್ಕಿ ಉತ್ಸವ ಜರುಗಲಿದೆ ಎಂದು ಮಾಹಿತಿ ನೀಡಿದರು.

ಹಾಸನಾಂಬ-ಸಿದ್ದೇಶ್ವರ ದೇವಾಲಯದ ಅರ್ಚಕರು ಹಾಗೂ ಭಕ್ತಾಧಿಗಳ ಸಹಕಾರದೊಂದಿಗೆ ಉತ್ಸವ ಹಾಸನಾಂಬ ದೇವಾಲಯದಿಂದ ಆರಂಭವಾಗಿ ಅರಳೇಪೇಟೆ, ಸಹ್ಯಾದ್ರಿ ರಸ್ತೆ ಮಾರ್ಗವಾಗಿ ಮಾರ್ಹವಾಗಿ ಮಹಾವೀರ ವೃತ್ತ, ಅಲ್ಲಿಂದ ದೇವಿಗೆರೆ ವೃತ್ತ ತಲುಪಲಿದೆ. ಭಕ್ತರ ಅಪೇಕ್ಷೆ ಮೇರೆಗೆ ನಗರದಲ್ಲಿ ಮೊದಲ ಬಾರಿಗೆ ಈ ಉತ್ಸವ ಜರುಗುತ್ತಿದ್ದು, ಗುರು ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ಉತ್ಸವ ಸಮಿತಿಯ ಪದಾಧಿಕಾರಿಗಳಾದ ನಾಗೇಂದ್ರಸ್ವಾಮಿ, ತ್ಯಾಗರಾಜು, ಸಚಿನ್, ದಯಾನಂದ್, ರೇವಣ್ಣ ಇದ್ದರು.

# ಕಲ್ಪನೆಗೆ ರೆಕ್ಕೆ ಕಟ್ಟಿದ ಬಾಲ ಲೇಖಕಿ ಮಾನ್ಯತಾ

**- ವಿಶ್ವಾಸ್ ಡಿ. ಗೌಡ**

ಇಂದಿನ ದಿನಗಳಲ್ಲಿ ಬಹುತೇಕ ಮಕ್ಕಳು ರಜಾ ದಿನಗಳಲ್ಲಿ ಮೊಬೈಲ್‌ಗಳಲ್ಲಿ ಸಮಯ ಕಳೆಯುತ್ತಿರುವಾಗ ವಿಜಯಪುರದ 14 ವರ್ಷದ ಬಾಲಕಿ ಮಾನ್ಯತಾ ಝಾ ಮಾತ್ರ ತನ್ನ ಕಲ್ಪನೆಗಳಿಗೆ ರೆಕ್ಕೆಗಳನ್ನು ಕಟ್ಟುತ್ತಾ ಸಾಹಿತ್ಯ ಲೋಕದಲ್ಲಿ ತನ್ನದೇ ಆದ ಹೆಜ್ಜೆ ಗುರುತು ಮೂಡಿಸಿದ್ದಾಳೆ. ತನ್ನ ವಯಸ್ಸಿನ ಮಕ್ಕಳಿಗಿಂತ ವಿಭಿನ್ನವಾಗಿ ಯೋಚಿಸಿದ ಈ ಬಾಲಕಿ, ಕೇವಲ ಹತ್ತನೇ ತರಗತಿಯಲ್ಲಿ ಓದುತ್ತಿರುವಾಗಲೇ ದಿ ಮಿಸ್ಟ್ರಿ ಆಫ್ ದ ಲಾಸ್ಟ್ ಬ್ಯಾಗ್ ಎಂಬ ಇಂಗ್ಲಿಷ್ ಕಾದಂಬರಿಯನ್ನು ಬರೆದು ಪ್ರಕಟಿಸಿರುವುದು ವಿಶೇಷ ಸಾಧನೆಯಾಗಿದೆ.

ಮಾನ್ಯತಾ ಕೇವಲ ಕಥೆ ಬರೆದಷ್ಟೇ ಅಲ್ಲ, ಅದನ್ನು ಪ್ರಕಟಿಸುವುದರಿಂದ ಹಿಡಿದು ಆನ್‌ಲೈನ್ ಪಬ್ಲಿಷರ್ ಹುಡುಕುವುದು ಹಾಗೂ ಅಮೆಜಾನ್ ಮತ್ತು ಫ್ಲಿಪ್‌ಕಾರ್ಟ್‌ಗಳಂತಹ ವೇದಿಕೆಗಳಲ್ಲಿ ತನ್ನ ಪುಸ್ತಕ ಲಭ್ಯವಾಗುವಂತೆ ಮಾಡುವುದನ್ನೂ ಸಂಪೂರ್ಣವಾಗಿ ಸ್ವತಃ ನಿರ್ವಹಿಸಿದ್ದಾಳೆ. ಇಷ್ಟು ಚಿಕ್ಕ ವಯಸ್ಸಿನಲ್ಲಿ ಇಂತಹ ಆತ್ಮವಿಶ್ವಾಸ ಮತ್ತು ಸೃಜನಶೀಲತೆ ತೋರಿರುವುದು ನಿಜಕ್ಕೂ ಪ್ರಶಂಸನೀಯ.

ಮಾನ್ಯತಾಳ ಸಾಹಿತ್ಯ ಪಯಣ ಆರಂಭವಾಗಿದ್ದು ಕೋವಿಡ್ ಸಮಯದಲ್ಲಿ. ಶಾಲೆಗಳು ಮುಚ್ಚಿದ್ದಾಗ ಮತ್ತು ಮಕ್ಕಳು ಮನೆಯಲ್ಲೇ ಸೀಮಿತರಾಗಿದ್ದಾಗ, ಅವಳು ಹೆಚ್ಚಿನ ಸಮಯವನ್ನು ಪುಸ್ತಕಗಳ ಜೊತೆ ಕಳೆದಳು. ವಿಶೇಷವಾಗಿ ಪೌರಾಣಿಕ ಕಥೆಗಳ ಪುಸ್ತಕಗಳು ಅವಳ ಮೇಲೆ ದೊಡ್ಡ ಪ್ರಭಾವ ಬೀರಿದವು. ಆ ಕಥೆಗಳ ಶೈಲಿ




ಮತ್ತು ಕಲ್ಪನೆಗಳು ಅವಳ ಮನಸ್ಸಿನಲ್ಲಿ ಹೊಸ ಚಿಂತನೆಗಳನ್ನು ಹುಟ್ಟಿಸಿದವು. ನಾನೂ ಕಥೆಗಳನ್ನು ಬರೆಯಬಹುದಲ್ಲವೆ ಎಂಬ ಆಲೋಚನೆಯೇ ಅವಳ ಬರವಣಿಗೆಯ ಮೊದಲ ಹೆಜ್ಜೆಯಾಯಿತು.

ಮೊದಲಿಗೆ ಅವಳು ಚಿಕ್ಕ ಕಥೆಗಳನ್ನು ಬರೆಯಲು ಆರಂಭಿಸಿದಳು. ಅವಳ ಮೊದಲ ಕಥೆ ಎ ವೈರ್ಡ್ ರೋಡ್ ಎಂಬುದು. ಅದರಲ್ಲಿ ಒಂದು ಹುಡುಗಿ ಅಪರೂಪದ ಗುಹೆಯೊಳಗೆ ಹೋಗಿ ವಿಚಿತ್ರ ಘಟನೆಗಳನ್ನು ಅನುಭವಿಸುವ ಕಥೆಯನ್ನು ಹೇಳಲಾಗಿದೆ. ಕೊನೆಯಲ್ಲಿ ಅದು ಕೇವಲ ಕನಸು ಎಂದು ತಿಳಿಯುತ್ತದೆ. ಈ ಕಥೆ ಅವಳ ಕಲ್ಪನಾ ಶಕ್ತಿಯ ಪ್ರತಿಬಿಂಬವಾಗಿತ್ತು.

ಇದುವರೆಗೆ ಮಾನ್ಯತಾ ಸುಮಾರು 15 ಚಿಕ್ಕ ಕಥೆಗಳನ್ನು ಬರೆದಿದ್ದಾಳೆ. ಅವಳ ಕುಟುಂಬದವರು ಮತ್ತು ಸ್ನೇಹಿತರು ಅವಳ ಕಥೆಗಳನ್ನು ಓದಿ ಸಲಹೆಗಳನ್ನು ನೀಡುತ್ತಿದ್ದರು. ವಿಶೇಷವಾಗಿ ಅವಳ ತಾಯಿ ಪ್ರತಿಯೊಂದು ಕಥೆಯನ್ನೂ ಓದಿ ತಿದ್ದುಪಡಿ ಸಲಹೆಗಳನ್ನು ನೀಡುತ್ತಿದ್ದರಂತೆ. ಈ ಪ್ರೋತ್ಸಾಹವೇ ಮಾನ್ಯತಾಳ ಆತ್ಮವಿಶ್ವಾಸವನ್ನು ಮತ್ತಷ್ಟು ಹೆಚ್ಚಿಸಿತು.

ಅವಳಿಗೆ ದೊಡ್ಡ ಕಥೆ ಬರೆಯಬೇಕೆಂಬ ಕನಸು ಮೂಡಿದ್ದು ಇದೇ ಸಂದರ್ಭದಲ್ಲಿ. ರೈಲ್ವೆ ಕಾಲೋನಿಯಲ್ಲಿ ವಾಸವಾಗಿದ್ದ ಕಾರಣ, ರೈಲ್ವೆ ನಿಲ್ದಾಣದಲ್ಲಿ ಜನರು ತಮ್ಮ ಬ್ಯಾಗ್‌ಗಳೊಂದಿಗೆ ಓಡಾಡುವುದನ್ನು ಅವಳು ಪ್ರತಿದಿನ ಗಮನಿಸುತ್ತಿದ್ದಳು. ಅಲ್ಲಿಯೇ ಅವಳ ಮನಸ್ಸಿನಲ್ಲಿ ಒಬ್ಬ ಹುಡುಗಿಯ ಬ್ಯಾಗ್ ಕಳೆದುಹೋದರೆ ಏನಾಗಬಹುದು ಎಂಬ ಪ್ರಶ್ನೆ ಮೂಡಿತು. ಈ ಚಿಂತನೆಯೇ ದಿ ಮಿಸ್ಟ್ರಿ ಆಫ್ ದ ಲಾಸ್ಟ್ ಬ್ಯಾಗ್ ಕಾದಂಬರಿಯ ಮೂಲವಾಗಿತು.

ಕಾದಂಬರಿಯ 20 ಶೇ. ಪೂರ್ಣಗೊಂಡಾಗಲೇ ಅವಳು ಅದನ್ನು ತನ್ನ ಕುಟುಂಬದವರು ಮತ್ತು ಸ್ನೇಹಿತರೊಂದಿಗೆ ಹಂಚಿಕೊಂಡಳು. ಅವರಿಂದ ಬಂದ ಮೆಚ್ಚುಗೆ ಮತ್ತು ಸಲಹೆಗಳು ಅವಳಿಗೆ ಮತ್ತಷ್ಟು ಉತ್ಸಾಹ ನೀಡಿದವು. ಕೆಲವೇ ತಿಂಗಳಲ್ಲಿ ಕಾದಂಬರಿ ಪೂರ್ಣಗೊಂಡಿತು.

ಮಾನ್ಯತಾಳ ಕಥೆಗಳಲ್ಲಿ ಮುಖ್ಯವಾಗಿ ಹುಡುಗಿಯರ ಬದುಕು, ಅವರ ಹೋರಾಟ ಮತ್ತು ಆತ್ಮವಿಶ್ವಾಸವನ್ನು ಚಿತ್ರಿಸಲಾಗಿದೆ. ಹುಡುಗಿಯರು ದುರ್ಬಲರಲ್ಲ, ಅವರು ಯಾವ ಸವಾಲನ್ನಾದರೂ ಎದುರಿಸಿ ಗೆಲ್ಲಬಲ್ಲರು ಎಂಬ ಸಂದೇಶವನ್ನು ತನ್ನ ಕಥೆಗಳ ಮೂಲಕ ಹೇಳಲು ಅವಳು ಬಯಸುತ್ತಾಳೆ.

ಮಾನ್ಯತಾಳ ತಂದೆ ಚಂದನ್ ಕುಮಾರ್ ಝಾ ಅವರು ರೈಲ್ವೆ ಇಲಾಖೆಯಲ್ಲಿ ಹಿರಿಯ ಉದ್ಯೋಗಿಯಾಗಿದ್ದಾರೆ. ನಮ್ಮ ಮಗಳಿಗೆ ಇಷ್ಟೊಂದು ಪ್ರತಿಭೆ ಇದೆ ಎಂದು ನಮಗೆ ಗೊತ್ತಿರಲಿಲ್ಲ. ಒಂದು ದಿನ ಅವಳು ತನ್ನ ಪುಸ್ತಕ ಪ್ರಕಟಿಸಲು ಸಿದ್ಧವಾಗಿದ್ದಾಳೆ ಎಂದು ಹೇಳಿದಾಗ ನಮಗೆ ಆಶ್ಚರ್ಯವೂ ಸಂತೋಷವೂ ಆಯಿತು ಎಂದು ಅವರು ಹೆಮ್ಮೆಯಿಂದ ಹೇಳಿದ್ದಾರೆ.

ಮಾನ್ಯತಾಳ ಯಶಸ್ಸಿನ ಹಿಂದೆ ಮನೆಯಲ್ಲಿದ್ದ ಓದುವ ವಾತಾವರಣವೂ ಒಂದು ಪ್ರಮುಖ ಕಾರಣವಾಗಿದೆ. ತಂದೆ ಪುಸ್ತಕ ಓದುವ ಹವ್ಯಾಸ ಹೊಂದಿದ್ದರೆ, ತಾಯಿಗೂ ಓದಿನ ಆಸಕ್ತಿ ಇತ್ತು. ಇದೇ ಸಾಹಿತ್ಯ ವಾತಾವರಣ ಮಾನ್ಯತಾಳಲ್ಲಿ ಓದು ಮತ್ತು ಬರವಣಿಗೆಯ ಪ್ರೀತಿ ಬೆಳೆಸಿತು.

ಇಂದಿನ ಯುವಪೀಳಿಗೆಗೆ ಮಾನ್ಯತಾ ನೀಡುವ ಸಂದೇಶವೂ ಅರ್ಥಪೂರ್ಣವಾಗಿದೆ. ಮೊಬೈಲ್‌ಗಳು ಇಂದಿನ ಜೀವನದಲ್ಲಿ ಅಗತ್ಯವಾಗಿರಬಹುದು. ಆದರೆ ಅದರ ಅತಿಯಾದ ಬಳಕೆ ಮಕ್ಕಳ ಓದು ಮತ್ತು ವ್ಯಕ್ತಿತ್ವ ಬೆಳವಣಿಗೆಯನ್ನು ಹಾಳು ಮಾಡುತ್ತದೆ. ಮೊಬೈಲ್ ಅನ್ನು ಹೊಸ ವಿಷಯಗಳನ್ನು ಕಲಿಯಲು ಮತ್ತು ಜ್ಞಾನ ಹೆಚ್ಚಿಸಿಕೊಳ್ಳಲು ಬಳಸಬೇಕು ಎಂದು ಅವಳು ಹೇಳುತ್ತಾಳೆ.

ಸಣ್ಣ ವಯಸ್ಸಿನಲ್ಲೇ ದೊಡ್ಡ ಕನಸು ಕಂಡು, ಅದನ್ನು ಸಾಧನೆಗೆ ತಂದುಕೊಂಡ ಮಾನ್ಯತಾ ಝಾ ಇಂದಿನ ಯುವಜನತೆಗೆ ಸ್ಪೂರ್ತಿದಾಯಕ ಮಾದರಿಯಾಗಿದ್ದಾಳೆ. ಅವಳ ಕಥೆ ಕೇವಲ ಒಬ್ಬ ಬಾಲಲೇಖಕಿಯ ಸಾಧನೆಯಲ್ಲ; ಅದು ಕಲ್ಪನೆ, ಪರಿಶ್ರಮ ಮತ್ತು ಆತ್ಮವಿಶ್ವಾಸದಿಂದ ಏನನ್ನಾದರೂ ಸಾಧಿಸಬಹುದು ಎಂಬ ನಂಬಿಕೆಯ ಜೀವಂತ ಉದಾಹರಣೆಯಾಗಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201
and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248